**All India Radio: Bangalore**
**National Bulletin In Kannada**
**06.07.2026 1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.07.2026 1.10 pm**

**<>><><*><><<>**

ಮುಖ್ಯಾಂಶಗಳು

**೧. ಮೂರು ರಾಷ್ಟ್ರಗಳ ಭೇಟಿಯ ಭಾಗವಾಗಿ ಇಂಡೋನೇಷ್ಯಾಗೆ ಪ್ರಧಾನಿ ನರೇಂದ್ರ ಮೋದಿ ಪ್ರವಾಸ**

**೨. ಬಿಹಾರ, ಗುಜರಾತ್, ಮಧ್ಯಪ್ರದೇಶ ಉಪಚುನಾವಣೆ; ಅಧಿಸೂಚನೆ ಹೊರಡಿಸಿದ ಚುನಾವಣಾ ಆಯೋಗ**

**೩. ಅಸ್ಸಾಂನ ಗುವಾಹಟಿಯಲ್ಲಿ ಇಂದಿನಿಂದ ಬ್ರಿಕ್ಸ್ ರಾಷ್ಟ್ರಗಳ ಮಾದಕವಸ್ತು ನಿಯಂತ್ರಣ ಸಂಸ್ಥೆಗಳ ಮುಖ್ಯಸ್ಥರ ಸಭೆ**

**೪. ಫಿಫಾ ವಿಶ್ವಕಪ್ ಫುಟ್ಬಾಲ್: ಮೆಕ್ಸಿಕೋ ವಿರುದ್ಧ ಗೆದ್ದು ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟ ಇಂಗ್ಲೆಂಡ್**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಇಂಡೋನೇಷ್ಯಾ, ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್‌ಗೆ ಆರು ದಿನಗಳ ಭೇಟಿಯ ಹಿನ್ನೆಲೆಯಲ್ಲಿ ಇಂದು ಇಂಡೋನೇಷ್ಯಾಗೆ ಪ್ರವಾಸ ಆರಂಭಿಸಿದ್ದಾರೆ. ನಿರ್ಗಮನಕ್ಕೂ ಮುನ್ನ ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ, ಈ ಭೇಟಿಯು ಭಾರತ-ಇಂಡೋನೇಷ್ಯಾ ನಡುವೆ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ ಎಂದು ಹೇಳಿದ್ದಾರೆ. ಮೂರು ರಾಷ್ಟ್ರಗಳ ಪ್ರವಾಸದ ಮೊದಲ ಚರಣದಲ್ಲಿ ಪ್ರಧಾನಿ ಅವರು ಇಂದು ಇಂಡೋನೇಷ್ಯಾಗೆ ಭೇಟಿ ನೀಡಲಿದ್ದಾರೆ. ಗುರುದೇವ್ ರಬೀಂದ್ರನಾಥ ಟ್ಯಾಗೋರರ ಭೇಟಿಯ ಶತಮಾನೋತ್ಸವದ ಅಂಗವಾಗಿ ೧೫ ತಿಂಗಳ ಕಾರ್ಯಕ್ರಮವನ್ನು ಈ ಸಂದರ್ಭದಲ್ಲಿ ಇಂಡೋನೇಷ್ಯಾ ಆಚರಿಸಲಿದೆ. ಈ ಕುರಿತ ಕಾರ್ಯಕ್ರಮಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಇಂಡೋನೇಷ್ಯಾ ಅಧ್ಯಕ್ಷ

ಪ್ರಬೋವೊ ಸುಬಿಯಾಂಟೊ ಅವರೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸಲಿದ್ದು, ಉಭಯ ದೇಶಗಳ ನಡುವೆ ಪಾಲುದಾರಿಕೆಯಲ್ಲಿ ಆಗಿರುವ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ.

**<>><><*><><<>**

ಬಿಹಾರ, ಗುಜರಾತ್ ಮತ್ತು ಮಧ್ಯಪ್ರದೇಶದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಚುನಾವಣಾ ಆಯೋಗ ಇಂದು ಅಧಿಸೂಚನೆ ಹೊರಡಿಸಿದೆ. ಬಿಹಾರದ ಬಂಕಿಪುರ ಕ್ಷೇತ್ರ, ಗುಜರಾತ್‌ನ ಮಂಜಲ್‌ಪುರ ಕ್ಷೇತ್ರ ಮತ್ತು ಮಧ್ಯಪ್ರದೇಶದ ದಾಟಿಯಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿದೆ. ಅಧಿಸೂಚನೆಯ ಪ್ರಕಾರ, ಜುಲೈ ೧೩ ರವರೆಗೆ ನಾಮಪತ್ರಗಳನ್ನು ಸ್ವೀಕರಿಸಲಾಗುತ್ತದೆ ಮತ್ತು ಜುಲೈ ೧೪ ರಂದು ಪರಿಶೀಲನೆ ನಡೆಯಲಿದೆ. ಈ ಸ್ಥಾನಗಳಿಗೆ ಜುಲೈ ೨೦ ರಂದು ಮತದಾನ ನಡೆಯಲಿದೆ. ಬಿಹಾರದಲ್ಲಿ, ಹಾಲಿ ಸದಸ್ಯ ನಿತಿನ್ ನಬಿನ್ ಅವರ ರಾಜೀನಾಮೆಯ ನಂತರ ಬಂಕಿಪುರ ಸ್ಥಾನಕ್ಕೆ ಉಪಚುನಾವಣೆ ಅಗತ್ಯವಾಗಿತ್ತು. ಗುಜರಾತ್‌ನಲ್ಲಿ, ಯೋಗೇಶ್‌ಭಾಯ್ ನರಂದಾಸ್ ಪಟೇಲ್ ಅವರ ನಿಧನದ ನಂತರ ಮಂಜಲ್‌ಪುರ ವಿಧಾನಸಭಾ ಕ್ಷೇತ್ರದಲ್ಲಿ ತೆರುವಾಗಿದೆ. ಏತನ್ಮಧ್ಯೆ, ಮಧ್ಯಪ್ರದೇಶದಲ್ಲಿ, ರಾಜೇಂದ್ರ ಭಾರತಿ ಅವರ ಅನರ್ಹತೆಯಿಂದಾಗಿ ದಾಟಿಯಾ ಸ್ಥಾನ ತೆರುವಾಗಿದೆ.

**<>><><*><><<>**

ಭಾರತೀಯ ಜನ ಸಂಘದ ಸಂಸ್ಥಾಪಕ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ೧೨೫ನೇ ಜನ್ಮ ವಾರ್ಷಿಕೋತ್ಸವ ಇಂದು. ಈ ಸಂದರ್ಭವನ್ನು ಗುರುತಿಸಲು ಕೇಂದ್ರ ಸಂಸ್ಕೃತಿ ಸಚಿವಾಲಯ, ಪಶ್ಚಿಮ ಬಂಗಾಳ ಸರ್ಕಾರದ ಸಹಯೋಗದೊಂದಿಗೆ ಕೋಲ್ಕತ್ತಾದಲ್ಲಿ ಕಾರ್ಯಕ್ರಮವನ್ನು ಆಯೋಜಿಸಿದೆ. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ಉಪರಾಷ್ಟ್ರಪತಿ ಭವನದಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿಯವರು, ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರು ವಿಶಿಷ್ಟ ಶಿಕ್ಷಣ ತಜ್ಞ, ದಾರ್ಶನಿಕ ರಾಜಕಾರಣಿ ಮತ್ತು ರಾಷ್ಟ್ರನಿರ್ಮಾಪಕ ಮತ್ತು ಭಾರತದ ಶೈಕ್ಷಣಿಕ, ರಾಜಕೀಯ ಹಾಗೂ ಪ್ರಜಾಪ್ರಭುತ್ವ ಪ್ರಯಾಣದಲ್ಲಿ ಶಾಶ್ವತವಾದ ಛಾಪನ್ನು ಮೂಡಿಸಿದ್ದಾರೆ ಎಂದು ಹೇಳಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಡಾ.ಶ್ಯಾಮ ಪ್ರಸಾದ್ ಮುಖರ್ಜಿ ಅವರ ೧೨೫ನೇ ಜನ್ಮ ದಿನಾಚರಣೆಯಂದು ಅವರಿಗೆ ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಡಾ.ಶ್ಯಾಮ ಪ್ರಸಾದ್ ಮುಖರ್ಜಿ ಅವರು ದೂರದೃಷ್ಟಿಯ ರಾಜಕಾರಣಿ, ವಿಶಿಷ್ಟ ವಿದ್ವಾಂಸ ಮತ್ತು ರಾಷ್ಟ್ರನಿರ್ಮಾಪಕರಾಗಿದ್ದರು. ಅವರು ರಾಷ್ಟ್ರದ ಏಕತೆಯನ್ನು ಕಾಪಾಡಲು, ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಬಲಪಡಿಸಲು ಮತ್ತು ರಾಷ್ಟ್ರೀಯ ಏಕೀಕರಣದ ಉದ್ದೇಶವನ್ನು ಮುನ್ನಡೆಸಲು ತಮ್ಮ

ಜೀವನವನ್ನು ಮುಡಿಪಾಗಿಟ್ಟಿದ್ದರು ಎಂದು ಹೇಳಿದ್ದಾರೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್.ಮುರುಗನ್ ಅವರು ಇಂದು ಸಂಸತ್‌ನ ಸೆಂಟ್ರಲ್ ಹಾಲ್‌ನಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಿದರು.

**<>><><*><><<>**

ಬ್ರಿಕ್ಸ್ ರಾಷ್ಟ್ರಗಳ ಮಾದಕವಸ್ತು ನಿಯಂತ್ರಣ ಸಂಸ್ಥೆಗಳ ಮುಖ್ಯಸ್ಥರ ಎರಡು ದಿನಗಳ ಸಭೆಯು ಇಂದಿನಿಂದ ಅಸ್ಸಾಂನ ಗುವಾಹಟಿಯಲ್ಲಿ ಆರಂಭವಾಗಲಿದೆ. ಈ ಸಭೆಗೆ ಭಾರತ ಆತಿಥ್ಯ ವಹಿಸಲಿದೆ. ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಮಾದಕವಸ್ತು ನಿಯಂತ್ರಣ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಹಿರಿಯ ಅಧಿಕಾರಿಗಳು ಈ ಸಭೆಯಲ್ಲಿ ಭಾಗವಹಿಸಲಿದ್ದು, ಸಂಸ್ಥೆಗಳ ನಡುವಿನ ನಿರಂತರ ಸಹಕಾರವನ್ನು ಬಲಪಡಿಸುವುದು ಮತ್ತು ಕಾರ್ಯಾಚರಣಾ ಮಟ್ಟದಲ್ಲಿ ಇನ್ನಷ್ಟು ಸಮನ್ವಯ ಸಾಧಿಸುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಕಾರ್ಯಾಚರಣಾ ಸಮನ್ವಯ ಬಲಪಡಿಸುವಿಕೆ, ಗುಪ್ತಚರ ಮಾಹಿತಿ ವಿನಿಮಯ, ಸಾಮರ್ಥ್ಯ ಅಭಿವೃದ್ಧಿ ಹಾಗೂ ಮಾದಕವಸ್ತುಗಳಿಗೆ ಸಂಬಂಧಿಸಿದ ಹೊಸ ಸವಾಲುಗಳನ್ನು ಎದುರಿಸಲು ಜಂಟಿ ಕಾರ್ಯತಂತ್ರ ರೂಪಿಸುವ ಕುರಿತು ಚರ್ಚೆ ನಿರೀಕ್ಷಿಸಲಾಗಿದೆ.

**<>><><*><><<>**

ಭಾರತದ ಅಧ್ಯಕ್ಷತೆಯಲ್ಲಿ ಎರಡು ದಿನಗಳ ಬ್ರಿಕ್ಸ್ ಮಹಿಳಾ ಕಾರ್ಯಪಡೆ ಸಭೆ ಕೇರಳದ ಕೊಚ್ಚಿಯಲ್ಲಿ ಇಂದಿನಿಂದ ಆರಂಭವಾಗಲಿದೆ. ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಹಿರಿಯ ಸರ್ಕಾರಿ ಅಧಿಕಾರಿಗಳು ಒಟ್ಟಾಗಿ ಸೇರಿ ಎಲ್ಲಾ ವಲಯಗಳಲ್ಲಿ ಮಹಿಳಾ ಸಬಲೀಕರಣ ಮತ್ತು ಮಹಿಳಾ ನೇತೃತ್ವದ ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚಿಸಲಿದ್ದಾರೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ತಿಳಿಸಿದೆ.

ಮಹಿಳಾ ಕಾರ್ಯಪಡೆ ಸಭೆಯು ಸದಸ್ಯ ರಾಷ್ಟ್ರಗಳಿಗೆ ಮಹಿಳಾ ನೇತೃತ್ವದ ಅಭಿವೃದ್ಧಿಯನ್ನು ಮುನ್ನಡೆಸುವ ನಿಟ್ಟಿನಲ್ಲಿ ಒಮ್ಮತವನ್ನು ಮೂಡಿಸಲು ಅವಕಾಶ ಒದಗಿಸುತ್ತದೆ.

**<>><><*><><<>**

ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಇಂದು ನವದೆಹಲಿಯಲ್ಲಿ ನಡೆಯಲಿರುವ ಕೇಂದ್ರ ಸಹಕಾರ ಸಚಿವಾಲಯದ ೪ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ’ಸಹಕಾರದಿಂದ ಸಮೃದ್ಧಿ’ ಪರಿಕಲ್ಪನೆಗೆ ಅನುಗುಣವಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಈ ಸಂದರ್ಭದಲ್ಲಿ ಅಮಿತ್ ಶಾ ಅವರು ೧೩೧ ಧಾನ್ಯ ಸಂಗ್ರಹ

ಗೋದಾಮುಗಳ ಉದ್ಘಾಟನೆ, 'ಸಹಕಾರ ವನ'ಕ್ಕೆ ಭೂಮಿಪೂಜೆ ಸೇರಿದಂತೆ ಹಲವು ಮಹತ್ವದ ಯೋಜನೆಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ.

<>><><*><><<>

ಸ್ವಿಟ್ಜರ್‌ಲ್ಯಾಂಡ್‌ನ ಜಿನಿವಾದಲ್ಲಿ ಇಂದಿನಿಂದ ಮೂರು ದಿನ ನಡೆಯಲಿರುವ ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿ ಕುರಿತ ತಜ್ಞರ ಅಂತರಸರ್ಕಾರಿ ಗುಂಪಿನ ಒಂಭತ್ತನೇ ಸಭೆಯ ಅಧ್ಯಕ್ಷತೆಯನ್ನು ಭಾರತ ವಹಿಸಲಿದೆ. ಈ ಸಭೆಯಲ್ಲಿ ವಿಶ್ವಸಂಸ್ಥೆಯ ಸದಸ್ಯ ರಾಷ್ಟ್ರಗಳು, ಅಂತರರಾಷ್ಟ್ರೀಯ ಸಂಸ್ಥೆಗಳು, ಗ್ರಾಹಕರ ಸಂರಕ್ಷಣಾ ಪ್ರಾಧಿಕಾರಗಳು, ಶಿಕ್ಷಣ ತಜ್ಞರು ಸೇರಿದಂತೆ ಸಂಬಂಧಿತರು ಭಾಗವಹಿಸಿ, ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲಿದ್ದಾರೆ. ಗ್ರಾಹಕರ ಸಂರಕ್ಷಣಾ ಕಾನೂನು ಮತ್ತು ನೀತಿ ಕುರಿತ ಸಹಕಾರ ಹಾಗೂ ಸಂವಾದಕ್ಕೆ ಈ ಅಂತರಸರ್ಕಾರಿ ತಜ್ಞರ ಗುಂಪು ಪ್ರಮುಖ ವೇದಿಕೆಯಾಗಿದೆ. ಗ್ರಾಹಕ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿ ನಿಧಿ ಖರೆ ಈ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಗ್ರಾಹಕರಿಗೆ ಮಾಹಿತಿ ಮತ್ತು ಜಾಗೃತಿ, ಸುಸ್ಥಿರ ಬಳಕೆ, ಜಾಗತಿಕ ಮಾರುಕಟ್ಟೆಗಳಲ್ಲಿ ಗ್ರಾಹಕರ ಸಂರಕ್ಷಣಾ ಕಾನೂನುಗಳ ಅನುಷ್ಠಾನ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

<>><><*><><<>

ಉಕ್ರೇನ್ ರಾಜಧಾನಿ ಕೈವ್ ಮೇಲೆ ಇಂದು ಬೆಳಗ್ಗೆ ರಷ್ಯಾ ಕ್ಷಿಪಣಿ ದಾಳಿ ನಡೆಸಿದೆ. ಟರ್ಕಿಯಲ್ಲಿ ನಡೆಯಲಿರುವ ಪ್ರಮುಖ ನ್ಯಾಟೋ ಶೃಂಗಸಭೆಗೆ ಒಂದು ದಿನ ಮೊದಲು ಈ ದಾಳಿ ಸಂಭವಿಸಿದೆ. ಈ ಶೃಂಗಸಭೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾಗವಹಿಸುವ ನಿರೀಕ್ಷೆಯಿದೆ. ದಾಳಿಯಲ್ಲಿ ರಷ್ಯಾ ಬ್ಯಾಲಿಸ್ಟಿಕ್ ಕ್ಷಿಪಣಿಗಳು, ಕ್ರೂಸ್ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಬಳಸಿದೆ ಎಂದು ಉಕ್ರೇನ್ ವಾಯುಪಡೆ ಹೇಳಿದೆ.

<>><><*><><<>

ಇರಾನ್‌ನ ಮಾಜಿ ಸರ್ವೋಚ್ಚ ನಾಯಕ ಅಯತೊಲ್ಲಾ ಸಯ್ಯದ್ ಅಲಿ ಖಮೇನಿ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದಕ್ಕಾಗಿ ಭಾರತ ಸರ್ಕಾರ ಮತ್ತು ಭಾರತೀಯರಿಗೆ ಇರಾನ್ ರಾಯಭಾರ ಕಚೇರಿ ಕೃತಜ್ಞತೆಗಳನ್ನು ವ್ಯಕ್ತಪಡಿಸಿದೆ. ಇದು ಉಭಯ ದೇಶಗಳ ನಡುವಿನ ಆಳವಾದ ಐತಿಹಾಸಿಕ, ಸಾಂಸ್ಕೃತಿಕ ಮತ್ತು ಮಾನವ ಬಾಂಧವ್ಯವನ್ನು ಪ್ರತಿಬಿಂಬಿಸುತ್ತದೆ. ಅಂತ್ಯಕ್ರಿಯೆಯಲ್ಲಿ ಭಾರತದ ನಾಯಕರು, ಸಂಸತ್ ಸದಸ್ಯರು, ವಿದ್ವಾಂಸರು ಮತ್ತು ವಿವಿಧ

ಧರ್ಮಗಳ ಪ್ರತಿನಿಧಿಗಳ ಉಪಸ್ಥಿತಿಯು ಎರಡು ರಾಷ್ಟ್ರಗಳ ನಡುವಿನ ದೀರ್ಘಕಾಲದ ಸಂಬಂಧವನ್ನು ಪ್ರತಿಬಿಂಬಿಸುತ್ತದೆ ಎಂದು ಇರಾನ್ ರಾಯಭಾರ ಕಚೇರಿ ಹೇಳಿದೆ.

**<>><><*><><<>**

ಮೆಕ್ಸಿಕೋ ನಗರದಲ್ಲಿ ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ೧೬ ರ ಸುತ್ತಿನಲ್ಲಿ ಪಂದ್ಯದಲ್ಲಿ ಮೆಕ್ಸಿಕೋ ವಿರುದ್ಧ ೩-೨ ಅಂತರದ ಜಯ ಸಾಧಿಸುವ ಮೂಲಕ ಇಂಗ್ಲೆಂಡ್ ಕ್ವಾರ್ಟರ್ ಫೈನಲ್‌ಗೆ ಲಗ್ಗೆ ಇಟ್ಟಿದೆ. ಇದಕ್ಕೂ ಮುನ್ನ ನಿನ್ನೆ ರಾತ್ರಿ ನಡೆದ ೧೬ ರ ಸುತ್ತಿನಲ್ಲಿ ಮತ್ತೊಂದು ಪಂದ್ಯದಲ್ಲಿ ಐದು ಬಾರಿಯ ವಿಶ್ವ ಚಾಂಪಿಯನ್ ಬ್ರೆಜಿಲ್ ತಂಡ, ನಾರ್ವೆ ವಿರುದ್ಧ ೨-೧ ಗೋಲುಗಳಿಂದ ಪರಾಭವಗೊಂಡಿದೆ. ನಾರ್ವೆ ಪರ ಎರ್ಲಿಂಗ್ ಹಾಲೆಂಡ್ ಎರಡು ಗೋಲು ಗಳಿಸಿದರು. ಇನ್ನೊಂದೆಡೆ, ಬ್ರೆಜಿಲ್‌ನ ಅನುಭವಿ ಆಟಗಾರ ನೇಮರ್ ಜೂನಿಯರ್ ಅಂತಾರಾಷ್ಟ್ರೀಯ ಫುಟ್‌ಬಾಲ್‌ನಿಂದ ನಿವೃತ್ತಿ ಘೋಷಿಸಿದ್ದಾರೆ. ಅವರು ಬ್ರೆಜಿಲ್ ತಂಡದ ಪ್ರಮುಖ ಆಟಗಾರರಾಗಿದ್ದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**